O.S.No. 23/2020 PW1

ಸಾಕ್ಷಿಗೆ ದಿನಾಂಕಃ **01.10.2024** ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ಃ ವಾದಿ ಪರ ಶ್ರೀ.ವಿ ಜಿ ವಕೀಲರಿಂದ

ನಾನು ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಈಗಾಗಲೇ ಸಲ್ಲಿಸಿದ್ದು, ಪ್ರಮಾಣಪತ್ರದಲ್ಲಿ ಹೇಳಿರುವ ಸಂಗತಿಗಳೆಲ್ಲವೂ ಸತ್ಯವಾಗಿದೆ ಎಂದು ಪ್ರಮಾಣೀಕರಿಸುತ್ತೇನೆ. ಪ್ರಮಾಣಪತ್ರವನ್ನು ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸದರಿ ಪ್ರಕರಣದಲ್ಲಿ ಮುಂದುವರೆದು ನಾನು ಹಾಜರುಪಡಿಸಿರುವ ದಾಖಲೆಗಳನ್ನು ಈಗ ನೋಡುತ್ತಿದ್ದೇನೆ, ಅವುಗಳನ್ನು ಈ ಕೆಳಕಂಡಂತೆ ಗುರುತಿಸಲಾಯಿತು.

1. ದಾವಾ ಸಂಃ 10/2009 ರ ವಾದಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-55
2. ದಾವಾ ಸಂಃ 10/2009 ರ ಪ್ರತಿವಾದಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-56 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯಲ್ಲಿ ಕೋರಿಕೊಂಡಂತೆ ಡಿಕ್ರಿ ಮಾಡಿಕೊಡಬೇಕಾಗಿ ಪ್ರಾರ್ಥಿಸಿಕೊಳ್ಳುತ್ತಿದ್ದೇನೆ.

ಪಾಟೀಸವಾಲುಃ ಪ್ರತಿವಾದಿ ಪರ ಶ್ರೀ.ಕೆ ಪಿ ಎಸ್ ವಕೀಲರಿಂದ ಃ

ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.

**(ದಿನಾಂಕಃ 01.10.2024 ರಂದು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

ಓ ಹೇ ಕೇ ಸ ಇ ಎ ಒ

ಪ್ರ.ದ.ನ್ಯಾದಂಃ ನ.ರಾ.ಪುರ.

ಸಾಕ್ಷಿ ಸಹಿಃ